**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.03.2024 / 2.30 p.m.**

**<><><><>**

೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮೊದಲ ಹಂತಕ್ಕೆ ಇಂದು ಅಧಿಸೂಚನೆ ಪ್ರಕಟವಾಗಿದೆ. ಮೊದಲ ಹಂತದಲ್ಲಿ ೧೭ ರಾಜ್ಯಗಳು ಮತ್ತು ೪ ಕೇಂದ್ರಾಡಳಿತ ಪ್ರದೇಶಗಳಲ್ಲಿನ ೧೦೨ ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಲೋಕಸಭಾ ಚುನಾವಣೆಯ ಮೊದಲ ಹಂತಕ್ಕೆ ಇಂದಿನಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿದೆ. ಇದೇ ೨೭ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ೨೮ ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಇದೇ ೩೦ ಕೊನೆಯ ದಿನವಾಗಿದ್ದು, ಏಪ್ರಿಲ್ ೧೯ರಂದು ಮತದಾನ ಜರುಗಲಿದೆ. ಏಪ್ರಿಲ್ ೧೯ರಂದು ಮೊದಲ ಹಂತದಲ್ಲಿ ತಮಿಳುನಾಡಿನ ೩೯ ಸ್ಥಾನಗಳು, ರಾಜಸ್ಥಾನದ ೧೨, ಉತ್ತರ ಪ್ರದೇಶದ ೮, ಮಧ್ಯ ಪ್ರದೇಶದ ೬, ಉತ್ತರಾಖಂಡ, ಅಸ್ಸಾಂ ಮತ್ತು ಮಹಾರಾಷ್ಟ್ರದ ತಲಾ ೫, ಬಿಹಾರದ ೪, ಪಶ್ಚಿಮ ಬಂಗಾಳದ ೩,  ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯದ ತಲಾ ೨ ಹಾಗೂ ಛತ್ತೀಸ್‌ಗಢ, ಮಿಜೋರಾಂ, ನಾಗಾಲ್ಯಾಂಡ್, ಸಿಕ್ಕಿಂ, ತ್ರಿಪುರಾ, ಅಂಡಮಾನ್ ಮತ್ತು ನಿಕೋಬಾರ್, ಜಮ್ಮು-ಕಾಶ್ಮೀರ, ಲಕ್ಷದ್ವೀಪ ಮತ್ತು ಪುದುಚೇರಿಯ ತಲಾ ಒಂದು ಸ್ಥಾನಗಳಿಗೆ ಮತದಾನ ನಡೆಯಲಿದೆ.

<><><><>

ಲೋಕಸಭೆ ಹಾಗೂ ೪ ರಾಜ್ಯಗಳಲ್ಲಿನ ವಿಧಾನಸಭೆ ಚುನಾವಣೆಗಳ ಹಿನ್ನೆಲೆ ಅಗತ್ಯ ಕರ್ತವ್ಯಗಳಿಗೆ ನಿಯೋಜನೆಗೊಂಡಿರುವ ಉದ್ಯೋಗಿಗಳಿಗೆ ಅಂಚೆ ಮೂಲಕ ಮತದಾನದ ಸೌಲಭ್ಯವನ್ನು ಚುನಾವಣಾ ಆಯೋಗ ಪ್ರಕಟಿಸಿದೆ. ಮತದಾನ ದಿನದ ಪ್ರಸಾರಕ್ಕಾಗಿ ನಿಯೋಜನೆಗೊಂಡಿರುವ ಉದ್ಯೋಗಿಗಳ ಪಟ್ಟಿಯಲ್ಲಿ ಮೆಟ್ರೋ, ರೈಲ್ವೆ, ಬಿಎಸ್‌ಎನ್‌ಎಲ್, ವಿದ್ಯುತ್ ಮತ್ತು ಆರೋಗ್ಯ ಇಲಾಖೆಗಳು, ಅಗ್ನಿಶಾಮಕ ದಳ, ಅಂಚೆ ಸೇವೆ, ವೈಮಾನಿಕ, ವಿಪತ್ತು ನಿರ್ವಹಣೆ, ದೂರದರ್ಶನ ಮತ್ತು ಆಕಾಶವಾಣಿ ಹಾಗೂ ಆಯೋಗದಿಂದ ಅಧಿಕಾರ ಪಡೆದ ಮಾಧ್ಯಮದವರು ಸೇರಿದ್ದಾರೆ. ೧೯೫೧ರ ಪ್ರಾತಿನಿಧ್ಯ ಕಾಯಿದೆಯ ನಿಬಂಧನೆಗಳ ಪ್ರಕಾರ ಈ ವಿಷಯ ಪರಿಗಣಿಸಿ, ಅಗತ್ಯ ಸೇವೆಗಳಲ್ಲಿ ಉದ್ಯೋಗದಲ್ಲಿರುವವರಿಗೆ ಕರ್ತವ್ಯದ ಮೇಲೆ ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಲು ಸೂಚಿಸಲಾಗಿದೆ ಎಂದು ಆಯೋಗ ಹೇಳಿದೆ.

<><><><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಿದ್ಧತೆ ಬಿರುಸಿನಿಂದ ನಡೆಯುತ್ತಿದೆ. ಮತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿ ಶೇಕಡಾವಾರು ಮತದಾನದ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿಗಳು ಸಜ್ಜಾಗುತ್ತಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಇಂದು ಭಾರತ ಚುನಾವಣಾ ಆಯೋಗ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಜಾಗೃತಿ ಜಾಥಾ ಆಯೋಜಿಸಲಾಗಿತ್ತು. ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎನ್.ಅನುರಾಧ ಪ್ರಜಾಪ್ರಭುತ್ವದ ಪ್ರಮುಖ ಅಂಗವಾಗಿರುವ ಮತದಾನದಲ್ಲಿ ಅರ್ಹ ಮತದಾರರೆಲ್ಲರೂ ಪಾಲ್ಗೊಳ್ಳಬೇಕು ಎಂದರು. ಮತದಾರರಲ್ಲಿ ಮತದಾನ ಕುರಿತು ಅರಿವು ಮೂಡಿಸಲು ಸ್ವೀಪ್ ಸಮಿತಿ ವತಿಯಿಂದ ಜಾಗೃತಿ ಜಾಥಾ, ರಂಗೋಲಿ ಸ್ಪರ್ಧೆ ಮತ್ತಿತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಲೋಕಸಭೆ ಚುನಾವಣೆ ಹಾಗೂ ಸುರಪುರ ವಿಧಾನಸಭಾ ಮತಕ್ಷೇತ್ರದ ಉಪಚುನಾವಣೆ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ವಿವಿಧ ಗ್ರಾಮಗಳ ಮತಗಟ್ಟೆಗಳಿಗೆ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹುಣಸಗಿ ತಾಲ್ಲೂಕಿನ ಮಾಳನೂರು,

ನಾರಾಯಣಪುರ ಗ್ರಾಮದ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಕಡ್ಡಾಯವಾಗಿ ವಾಹನಗಳ ತಪಾಸಣೆ ಮಾಡಿ ಕಟ್ಟೆಚ್ಚರ ವಹಿಸಬೇಕು ಎಂದು ಸೂಚಿಸಿದರು. ಎಲ್ಲಾ ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಮತ್ತಿತರ ಮೂಲ ಸೌಲಭ್ಯ ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ವಿಧಾನಸಭಾ ಕ್ಷೇತ್ರವಾರು ವಿದ್ಯುನ್ಮಾನ ಮತಯಂತ್ರಗಳನ್ನು ಭೌತಿಕವಾಗಿ ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಸಮಕ್ಷಮದಲ್ಲಿ ತಂತ್ರಾಂಶ ಆಧಾರಿಸಿದ ಯದೃಚ್ಛಿಕರಣ ಕಾರ್ಯ ನಡೆಸಿ ಮಾತನಾಡಿದ ಜಿಲ್ಲಾಧಿಕಾರಿ ಮೊದಲ ಹಂತದ ಮತಯಂತ್ರಗಳ ಪರಿಶೀಲನೆ ಕಾರ್ಯ ನಡೆಸಲಾಗಿದೆ. ಎಲ್ಲ ಯಂತ್ರಗಳು ಸುಸ್ಥಿತಿಯಲ್ಲಿವೆ. ಚುನಾವಣೆ ವೀಕ್ಷಕರ ಸಮ್ಮುಖದಲ್ಲಿ ೨ನೇ ಹಂತದ ಯದೃಚ್ಛಿಕರಣ ಕಾರ್ಯ ನಡೆಯಲಿದೆ ಎಂದು ತಿಳಿಸಿದರು. ಹಾವೇರಿ ಜಿಲ್ಲೆಯಾದ್ಯಂತ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಹಾಗೂ ಸಂಶಯಾಸ್ಪದ ಚಟುವಟಿಕೆಗಳ ಮೇಲೆ ತೀವ್ರ ನಿಗಾ ವಹಿಸಲು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಾದರಿ ನೀತಿ ಸಂಹಿತೆ ಅನುಷ್ಠಾನ ಕುರಿತು ಸಹಾಯಕ ಚುನಾವಣಾಧಿಕಾರಿ ತಹಶೀಲ್ದಾರ್ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣ ಅಧಿಕಾರಿಗಳೊಂದಿಗೆ ಇಂದು ವಿಡಿಯೋ ಸಂವಾದ ನಡೆಸಿದ ಅವರು ಅನುಮತಿಯಿಲ್ಲದ ಚುನಾವಣಾ ಪ್ರಚಾರ ಸಾಮಗ್ರಿಗಳು ಹಾಗೂ ವಿವಿಧ ಜಾಹಿರಾತು ಫಲಕಗಳನ್ನು ತೆರವುಗೊಳಿಸಲು ನಿರ್ದೇಶಿಸಿದರು. ಚುನಾವಣೆ ಸಮಯದಲ್ಲಿ ಅಕ್ರಮ ಮದ್ಯ ಹಾಗೂ ಕಳ್ಳಭಟ್ಟಿ, ಸಾರಾಯಿ ತಯಾರಿಸಿ, ಸಂಗ್ರಹಿಸಿ, ಮಾರಾಟ ಮಾಡುವಂತಹ ಅಕ್ರಮಗಳು ಮಾಡುವ ಹಾಗೂ ಇಂತಹ ಕಳ್ಳ ಭಟ್ಟಿಯನ್ನು ಮತದಾರರಿಗೆ ಸರಬರಾಜು ಮಾಡುವ ಸಾಧ್ಯತೆ ಇದ್ದು, ಇವುಗಳನ್ನು ತಡೆಗಟ್ಟಲು ಅಬಕಾರಿ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಸಾರ್ವಜನಿಕರು ಮಾಹಿತಿ ನೀಡಲು ೧೮೦೦೪೨೫೦೪೬೧ ಸಹಾಯವಾಣಿ ಆರಂಭಿಸಲಾಗಿದೆ ಎಂದು ವಿಜಯಪುರ ಜಿಲ್ಲೆಯ ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>